**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪಂರಾ 191 ಜಿಪಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:30-05-2020.

**ಸೇರ್ಪಡೆ ಮಾರ್ಗಸೂಚಿ**

**ವಿಷಯ:** 15ನೇ ಹಣಕಾಸು ಆಯೋಗ ಅನುದಾನ ಯೋಜನೆಯ 2020-21ನೇ ಸಾಲಿನ ಕ್ರಿಯಾಯೋಜನೆ ತಯಾರಿಸುವ ಸಂಬಂಧ ಹೊರಡಿಸಿರುವ ಮಾರ್ಗಸೂಚಿಗಳಿಗೆ ಹೆಚ್ಚುವರಿ ಸೇರ್ಪಡೆಯ ಕುರಿತು.

**ಉಲ್ಲೇಖ:**
1. ಸರ್ಕಾರದ ಮಾರ್ಗಸೂಚಿ ಪತ್ರ ಸಂಖ್ಯೆ:ಗ್ರಾಅಪ 191 ಜಿಪಸ 2020 ದಿನಾಂಕ:13-05-2020.
2. ರಾಜ್ಯ ಆಯುಕ್ತರು, ರಾಜ್ಯ ಆಯುಕ್ತರು ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಛೇರಿ ಇವರ ಪತ್ರ ಸಂಖ್ಯೆ:ಅಂ.ಅ.ನಿ.ವಿ-2:07:2019-20/104 ದಿನಾಂಕ:27-05-2020.

*****

15ನೇ ಹಣಕಾಸು ಆಯೋಗ ಅನುದಾನ ಯೋಜನೆಯ 2020-21ನೇ ಸಾಲಿನ ಕ್ರಿಯಾಯೋಜನೆ ತಯಾರಿಸುವ ಸಂಬಂಧ ಉಲ್ಲೇಖ(1)ರಲ್ಲಿ ಸರ್ಕಾರ ಮಾರ್ಗಸೂಚಿಗಳನ್ನು ನೀಡಿರುತ್ತದೆ. ಉಲ್ಲೇಖ(2)ರಲ್ಲಿ ರಾಜ್ಯ ಆಯುಕ್ತರು ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಛೇರಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯಲ್ಲಿ ಅಂಗವಿಕಲ ವ್ಯಕ್ತಿಗಳ ಸರ್ವತೋಮುಖ ಅಭಿವೃದ್ಧಿಗಾಗಿ 15ನೇ ಹಣಕಾಸು ಆಯೋಗ ಅನುದಾನದಲ್ಲಿ ಶೇ.5ರಷ್ಟು ಅನುದಾನವನ್ನು ಮೀಸಲಿಸಿರಬೇಕೆಂದು ಕೋರಿರುತ್ತಾರೆ. ಸರ್ಕಾರವು ಈ ಬಗ್ಗೆ ಪರಿಶೀಲಿಸಿರುತ್ತದೆ. ಆದಕಾರಣ ಈಗಾಗಲೇ ಉಲ್ಲೇಖ(1)ರಲ್ಲಿ ಹೊರಡಿಸಲಾಗಿರುವ 15ನೇ ಹಣಕಾಸು ಆಯೋಗದ ಅನುದಾನ ಬಳಕೆಯ ಬಗ್ಗೆ ಮಾರ್ಗಸೂಚಿಗಳಲ್ಲಿ ಕ್ರಮ ಸಂಖ್ಯೆ:9ರ ನಂತರ ಹೊಸದಾಗಿ ಕ್ರಮ ಸಂಖ್ಯೆ:9(a)ನ್ನು ಸೇರ್ಪಡೆ ಮಾಡಿದೆ.

**9(a) "ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಲಭ್ಯವಾಗಿರುವ ಅನುದಾನದಲ್ಲಿ ಶೇ.5% ಅನುದಾನವನ್ನು ವಿಶೇಷಚೇತನರಿಗೆ ಸಂಬಂಧಿಸಿದ ಕಾಮಗಾರಿಗಳನ್ನು ತೆಗೆದುಕೊಳ್ಳಲು ಮೀಸಲಿರಿಸತಕ್ಕದ್ದು".** ವೈಯಕ್ತಿಕ ಸವಲತ್ತುಗಳನ್ನು ನೀಡಲು ಅವಕಾಶವಿರುವುದಿಲ್ಲವೆಂಬುದನ್ನು ತಿಳಿಸಿದೆ.

30/05/2020
(ಸಿ ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

30.05.2020

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು(ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ).
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತಕಾರ್ಯದರ್ಶಿರವರ ಮಾಹಿತಿಗಾಗಿ.
4. ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತಸಹಾಯಕರು.
5. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
6. ವೆಬ್ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.